ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಐದನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 10ನೇ ಡಿಸೆಂಬರ್, 2014
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

2. ಅರ್ಜಿಯನ್ನೊಪ್ಪಿಸುವುದು

ಶ್ರೀ ಎಂ.ಪಿ. ಅಪ್ಪಚ್ಚು (ರಂಜನ್) (ಸದಸ್ಯರು, ಅರ್ಜಿಗಳ ಸಮಿತಿ) ಅವರು:-

ರಾಜ್ಯದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಜಮೀನು ಪರಭಾರೆ (ಪಿ.ಟಿ.ಸಿ.ಎಲ್) ಕಾನೂನಿನಂತೆ, ಸರ್ಕಾರದ ಪರವಾನಗಿ ಪಡೆದು ಜಮೀನು ಮಾರಲು ಅವಕಾಶ ಇರುವುದರಿಂದ, ಅದರಂತೆ ಜಮೀನು ಪರಭಾರೆಗೆ ಅವಕಾಶ ಮಾಡಿಕೊಡುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಹೆಚ್.ಡಿ.ಕುಮಾರಸ್ವಾಮಿ, ವೈ.ಎಸ್.ವಿ.ದತ್ತ, ಹೆಚ್.ಡಿ.ರೇವಣ್ಣ, ಎನ್. ಚಲುವರಾಯ ಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹಾಗೂ ಇತರರು ರಾಜ್ಯದಲ್ಲಿ ಕಬ್ಬು ಬೆಳೆಗಾರರಿಗೆ ಪ್ರತಿ ಟನ್ ಕಬ್ಬಿನ ದರ ರೂ 2500 ನೀಡುವುದಾಗಿ ಸರ್ಕಾರ ಹೊರಡಿಸಿರುವ ಆದೇಶವು ಜಾರಿಯಾಗದಿರುವುದರಿಂದ ಉದ್ಭವಿಸಿರುವ ಪರಿಸ್ಥಿತಿ ಬಗ್ಗೆ

ಮತ್ತು

ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಆರ್. ಅಶೋಕ್, ಗೋವಿಂದ ಎಂ. ಕಾರಜೋಳ, ವಿಶ್ವೇಶ್ವರ ಹೆಗಡೆ ಕಾಗೇರಿ, ಬಸವರಾಜ ಬೊಮ್ಮಾಯಿ ಹಾಗೂ ಇತರರು ರಾಜ್ಯದಲ್ಲಿ ಕಬ್ಬು ಬೆಳೆಗೆ ನಿಗದಿತ ಬೆಲೆ 2500ರೂ ಗಳನ್ನು ಘೋಷಣೆಯಾಗಿದ್ದರೂ ಹಲವಾರು ಸಕ್ಕರೆ ಕಾರ್ಖಾನೆಗಳು ಸದರಿ ಬೆಲೆಯನ್ನು ರೈತರಿಗೆ ಪಾವತಿಸದಿರುವ ಬಗ್ಗೆ ಹಾಗೂ ರಾಜ್ಯದಲ್ಲಿ ರೈತರು ಬೆಳೆದ ಮೆಕ್ಕೆಜೋಳ, ಹತ್ತಿ, ಈರುಳ್ಳಿ, ಭತ್ತ ಮತ್ತು ಇತರ ಬೆಳೆಗಳ ಬೆಲೆ ಕುಸಿದಿರುವುದರಿಂದ ಬೆಂಬಲ ಬೆಲೆ ಘೋಷಣೆ ಮಾಡುವ ಬಗ್ಗೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

ಮು.ತಿ.ನೋ.,

4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಮಾಲೀಕಯ್ಯ ವೆಂಕಯ್ಯ ಗುತ್ತೇದಾರ್ ಅವರು ಕಲಬುರ್ಗಿ ಜಿಲ್ಲೆ ಅಫಜಲಪೂರ ಮತಕ್ಷೇತ್ರದಲ್ಲಿ ಗುಡಿಸಲುಗಳಲ್ಲಿ ವಾಸಿಸುವ ಅತ್ಯಂತ ಕಡು ಬಡವರಿಗೆ ವಿವಿಧ ಯೋಜನೆ ಅಡಿಯಲ್ಲಿ ಮನೆಗಳನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.
2. ಶ್ರೀ ತುಕಾರಾಂ ಇ. ಅವರು ರಾಜ್ಯದ ಸಮಾಜ ಕಲ್ಯಾಣ ಇಲಾಖೆಯ ಅಧೀನ ಸಂಸ್ಥೆಯಾದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಅಡಿಯಲ್ಲಿ (ಕಿಯೋನಿಕ್ಸ್) ಕಳೆದ 10-11 ವರ್ಷಗಳಿಂದ ನಡೆಸಲಾಗುತ್ತಿರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ ಪ್ರಾಂಶುಪಾಲರಾಗಿ/ಶಿಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.
3. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ತಾಲ್ಲೂಕಿನ ಕಳಸ ಗ್ರಾಮ ಪಂಚಾಯತಿಯ ವ್ಯಾಪ್ತಿಯ ಪ್ರಮುಖ ರಸ್ತೆಯನ್ನು ಕಾಂಕ್ರಿಟ್ ರಸ್ತೆಯನ್ನಾಗಿ ಮಾಡುವ ಪ್ರಸ್ತಾವದ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
4. ಶ್ರೀ ವೈ.ಎನ್. ರುದ್ರೇಶ್‌ಗೌಡ ಅವರು ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿಯ ಶಿರಾಡಿ ಘಾಟ್‌ನ ರಸ್ತೆ ದುರಸ್ತಿ ಕಾರಣ ಸಂಚಾರ ಬಂದ್ ಮಾಡಲಾಗಿದ್ದು, ಅದರಿಂದ ಚಾರ್ಮಾಡಿ ಘಾಟ್ ಮೂಲಕ ಸಂಚಾರ ದಟ್ಟಣೆ ಹೆಚ್ಚಾಗಿರುವುದರಿಂದ ರಾಷ್ಟ್ರೀಯ ಹೆದ್ದಾರಿ 234ರಲ್ಲಿನ ರಸ್ತೆಯನ್ನು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.
5. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕು ಕಸಬಾ ಹೋಬಳಿಯ ಪಡುವಲಹಿಪ್ಪೆ ಹಾಗೂ ಚನ್ನರಾಯಪಟ್ಟಣ ತಾಲ್ಲೂಕು ದಂಡಿಗನಹಳ್ಳಿ ಹೋಬಳಿಯ ಉದಯಪುರ ಹಾಗೂ ಹಾಸನ ತಾಲ್ಲೂಕು ಶಾಂತಿ ಗ್ರಾಮ ಹೋಬಳಿಯ ಮೊಸಳೆಹೊಸಳ್ಳಿ ಸಮುದಾಯ ಆಸ್ಪತ್ರೆಗಳಲ್ಲಿ ಖಾಲಿಯಿರುವ ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಗಳ ಹುದ್ದೆ ಭರ್ತಿಯಾಗದಿರುವುದರಿಂದ ಹಾಗೂ ಅಲ್ಲಿನ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ಸಾರ್ವಜನಿಕರಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)